# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2374 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವವರು | : | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 22.03.2022 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕೋವಿಡ್‌ನಿಂದಾಗಿ ಎಷ್ಟು ಸಣ್ಣ ಕೈಗಾರಿಕೆಗಳು ಮುಚ್ಚುವ ಹಂತದಲ್ಲಿದೆ ಹಾಗೂ ಮುಚ್ಚಲಾಗಿದೆ; (ವಿವರ ಒದಗಿಸುವುದು) | ರಾಜ್ಯದಲ್ಲಿ ಕೋವಿಡ್ ಅವಧಿಯಲ್ಲಿ ಕೈಗಾರಿಕೆಗಳು ಮುಚ್ಚಿರುವ ಬಗ್ಗೆಯಾಗಲಿ ಮುಚ್ಚುತ್ತಿರುವ ಬಗ್ಗೆಯಾಗಲಿ ನೊಂದಣಿ ಮಾಡಿಕೊಳ್ಳುವ ವ್ಯವಸ್ಥೆ ಜಾರಿಯಲ್ಲಿರುವುದಿಲ್ಲವಾದ್ದರಿಂದ ಯಾವುದೇ ಮಾಹಿತಿ ಲಭ್ಯವಿರುವುದಿಲ್ಲ. |
| ಆ) | ಸಣ್ಣ ಕೈಗಾರಿಕೆಗಳನ್ನು ಅಭಿವೃದ್ಧಿಪಡಿಸಲು ಎಂ.ಎಸ್.ಎಂ.ಇ ಯಿಂದ ಸುಲಭವಾಗಿ ಸಣ್ಣ ಮತ್ತು ಅತಿ ಸೂಕ್ಷ್ಮ ಕೈಗಾರಿಕೆಗಳಿಗೆ ಹೆಚ್ಚಿನ ಸಾಲ ಸೌಲಭ್ಯವನ್ನು ನೀಡಿ ಕೈಗಾರಿಕೆಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮಗಳೇನು? | ಸಣ್ಣ ಕೈಗಾರಿಕೆಗಳನ್ನು ಅಭಿವೃದ್ಧಿಪಡಿಸಲು ಎಂ.ಎಸ್.ಎಂ.ಇ ಯಿಂದ ಸುಲಭವಾಗಿ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳ ಕೈಗಾರಿಕೆಗಳ ಅಭಿವೃದ್ಧಿಗೆ ಸರ್ಕಾರ ಅನೇಕ ಯೋಜನೆಗಳನ್ನು ರೂಪಿಸಿದ್ದು ಅವುಗಳ ವಿವರಗಳು ಈ ಕೆಳಗಿನಂತಿವೆ.<br><br>1. **ಕೇಂದ್ರ ಸರ್ಕಾರದ ಪ್ರಧಾನಮಂತ್ರಿಗಳ ಉದ್ಯೋಗ ಸೃಜನ ಯೋಜನೆಯಡಿ** ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಗರಿಷ್ಟ ಸಾಲ ರೂ. 25 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ. 15 ರಿಂದ ಶೇ.35 ರವರೆಗೆ ಗರಿಷ್ಠ ರೂ.3.75 ಲಕ್ಷದಿಂದ ರೂ.8.75 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ.<br><br>2. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳು ಸ್ಥಾಪಿಸಲು ರೂ.5.00 ಕೋಟಿಗಳವರೆಗೆ ಸಾಲ ಪಡೆದು ನಿಗದಿತ ಸಮಯದಲ್ಲಿ ಮರುಪಾವತಿ ಮಾಡಿದ ಅತಿ ಸಣ್ಣ ಮತ್ತು ಸಣ್ಣ ಕೈಗಾರಿಕಾ ಘಟಕಗಳಿಗೆ 5 ವರ್ಷಗಳ ಅವಧಿಗೆ ಶೇಕಡ 6 ರಂತೆ ಬಡ್ಡಿ ಸಹಾಯಧನ ನೀಡಲಾಗುವುದು.<br><br>3. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ವರ್ಗದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಶೇ. 75 ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು ಮತ್ತು ಕೈಗಾರಿಕಾ ಶೆಡ್‌ಗಳನ್ನು ನೀಡಲಾಗುತ್ತಿದೆ. |



Generated from eOffice by NAGARAJ MTB CAI-MIN(NMTB), MINISTER, C&I SEC on 18/03/2022 05:09 AM

| | | |
|---|---|---|
| | | 4. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ವರ್ಗದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕಿನಿಂದ ಸಾಲ ಒದಗಿಸಿ ಯೋಜನಾ ವೆಚ್ಚದ ಮೇಲೆ ಶೇ 60 ರಷ್ಟು ಗರಿಷ್ಟ ರೂ.5.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.<br><br>5. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ವರ್ಗದ ಮೊದಲ ಪೀಳಿಗೆಯ ಉದ್ಯಮಿದಾರರು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಸ್ಥಾಪಿಸುವ ಹೊಸ ಘಟಕಗಳಿಗೆ ಗರಿಷ್ಟ ರೂ.5.00 ಕೋಟಿ ಯೋಜನಾ ವೆಚ್ಚದಲ್ಲಿ The Debt Equity Ratio 2:1 ಪ್ರಕಾರ (2/3 ರಷ್ಟು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು 1/3 ಪ್ರವರ್ತಕರ ಬಂಡವಾಳ)ಘಟಕಕ್ಕೆ ಪ್ರವರ್ತಕ ಬಂಡವಾಳ ಹೂಡಿಕೆಯ 1/3 ರಲ್ಲಿ ಶೇ.50 ರಷ್ಟು ಬಡ್ಡಿರಹಿತ ಗರಿಷ್ಟ ರೂ.75 ಲಕ್ಷ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ನೀಡಲಾಗುತ್ತಿದೆ.<br><br>6. ಕರ್ನಾಟಕ ರಾಜ್ಯ ಕೈಗಾರಿಕಾ ನೀತಿ 2020-25 ರಂತೆ ಕೆಳಕಾಣಿಸಿದ ಪ್ರೋತ್ಸಾಹ ಮತ್ತು ರಿಯಾಯಿತಿ ಸೌಲಭ್ಯಗಳನ್ನು ಅರ್ಹ ಕೈಗಾರಿಕೆಗಳಿಗೆ ನೀಡಿ ಉತ್ತೇಜಿಸಲಾಗುತ್ತಿದೆ.<br>1. ಮುದ್ರಾಂಕ ಶುಲ್ಕ ವಿನಾಯಿತಿ<br>2. ನೋಂದಣಿ ಶುಲ್ಕ ರಿಯಾಯಿತಿ.<br>3. ಬಂಡವಾಳ ಹೂಡಿಕೆ ಸಹಾಯಧನ<br>4. ಕಿರು ಮತ್ತು ಸಣ್ಣ ಕೈಗಾರಿಕೆಗಳಿಗೆ ವಿದ್ಯುತ್ ಸಹಾಯಧನ<br>5. ಭೂ ಪರಿವರ್ತನಾ ಶುಲ್ಕ ಮರುಪಾವತಿ.<br>6. ರಫ್ತು ಆಧಾರಿತ ಘಟಕಗಳಿಗೆ ರಿಯಾಯಿತಿ.<br>7. ತ್ಯಾಜ್ಯ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಸಹಾಯಧನ.<br>8. ವಿದ್ಯುತ್ ತೆರಿಗೆ ವಿನಾಯಿತಿ<br>9. ತಾಂತ್ರಿಕ ಉನ್ನತೀಕರಣ, ಗುಣಮಟ್ಟ ಪ್ರಮಾಣ ಪತ್ರ ಸಹಾಯಧನ<br>10. ಮಳೆ ನೀರುಕೊಯ್ಲು / ಸಂರಕ್ಷಣೆ ಸಹಾಯಧನ<br>11. ತಂತ್ರಜ್ಞಾನ ಉನ್ನತೀಕರಣಕ್ಕೆ ಬಡ್ಡಿ ಸಹಾಯಧನ |
| ಇ) | ರಾಜ್ಯದ ಅರ್ಥ ವ್ಯವಸ್ಥೆಗೆ ಕೈಗಾರಿಕಾ ವಲಯಗಳಿಂದ ಇಳಿಮುಖವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;<br>ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಕೋವಿಡ್ ಸಂದರ್ಭದಲ್ಲಿ ರಾಜ್ಯದ ಅರ್ಥವ್ಯವಸ್ಥೆಗೆ ಕೈಗಾರಿಕಾ ವಲಯಗಳಿಂದ ಇಳಿಮುಖವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆ ಅಡಿಯಲ್ಲಿ ಇವುಗಳನ್ನು ಪುನ:ಶ್ಚೇತನಗೊಳಿಸಲು ಹಮ್ಮಿಕೊಂಡಿರುವ ಯೋಜನೆಗಳು ಈ ಕೆಳಗಿನಂತಿವೆ.<br><br>ಕೇಂದ್ರ ಸರ್ಕಾರದ ಯೋಜನೆ:<br><br>ಕೇಂದ್ರ ಸರ್ಕಾರ ಘೋಷಿಸಿರುವ "ಆತ್ಮ ನಿರ್ಭರ ಭಾರತ |



Generated from eOffice by NAGARAJ MTB, C&I-MIN(NMTB) MINISTER, C&I SEC on 18/03/2022 09:06 AM

ಅಭಿಯಾನ" ದ ಅಡಿಯಲ್ಲಿ ಅತೀ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳನ್ನು ಪುನಶ್ಚೇತನಗೊಳಿಸಲು ಮತ್ತು ಉದ್ಯಮಗಳಿಗೆ ಆರ್ಥಿಕ ನೆರವು ನೀಡುವ ಯೋಜನೆಯಲ್ಲಿ ಈ ಕೆಳಗಿನ ನೆರವು ದೊರೆತಿದೆ.

ಭಾರತ ಸರ್ಕಾರವು "ಇ.ಸಿ.ಎಲ್.ಜಿ"-ಎಮರ್ಜೆನ್ಸಿ ಕ್ರೆಡಿಟ್ ಲೈನ್ ಗ್ಯಾರಂಟಿ ಯೋಜನೆಯನ್ನು ಜಾರಿಗೆ ತಂದಿದ್ದು ಇದರನ್ವಯ ಫೆಬ್ರವರಿ 2020 ರ ಅಂತ್ಯಕ್ಕೆ ಬ್ಯಾಂಕ್‌ಗಳಲ್ಲಿ ಬಾಕಿ ಇರುವ ಎಂ.ಎಸ್.ಎಂ.ಇ ಘಟಕಗಳ ಸಾಲದ ಮೊತ್ತಕ್ಕೆ ಶೇ 20% ರಷ್ಟು ಹೆಚ್ಚುವರಿ ಸಾಲವನ್ನು ಯಾವುದೇ ಹೆಚ್ಚುವರಿ ಖಾತರಿ ಇಲ್ಲದೇ ನೀಡುವ ಯೋಜನೆಯನ್ನು ಜಾರಿಗೆ ತಂದಿರುತ್ತದೆ.

**ಕೇಂದ್ರ ಸರ್ಕಾರದ ಯೋಜನೆ:**

ಕೇಂದ್ರ ಸರ್ಕಾರ ಘೋಷಿಸಿರುವ "ಆತ್ಮ ನಿರ್ಭರ ಭಾರತ ಅಭಿಯಾನ" ದ ಅಡಿಯಲ್ಲಿ ಅತೀ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳನ್ನು ಪುನಶ್ಚೇತನಗೊಳಿಸಲು ಮತ್ತು ಉದ್ಯಮಗಳಿಗೆ ಆರ್ಥಿಕ ನೆರವು ನೀಡುವ ಯೋಜನೆಯಲ್ಲಿ ಈ ಕೆಳಗಿನ ನೆರವು ದೊರೆತಿದೆ.

ಭಾರತ ಸರ್ಕಾರವು "ಇ.ಸಿ.ಎಲ್.ಜಿ"-ಎಮರ್ಜೆನ್ಸಿ ಕ್ರೆಡಿಟ್ ಲೈನ್ ಗ್ಯಾರಂಟಿ ಯೋಜನೆಯನ್ನು ಜಾರಿಗೆ ತಂದಿದ್ದು, ಇದರನ್ವಯ ಫೆಬ್ರವರಿ 2020 ರ ಅಂತ್ಯಕ್ಕೆ ಬ್ಯಾಂಕ್‌ಗಳಲ್ಲಿ ಬಾಕಿ ಇರುವ ಎಂ.ಎಸ್.ಎಂ.ಇ ಘಟಕಗಳ ಸಾಲದ ಮೊತ್ತಕ್ಕೆ ಶೇ. 20% ರಷ್ಟು ಹೆಚ್ಚುವರಿ ಸಾಲವನ್ನು ಯಾವುದೇ ಹೆಚ್ಚುವರಿ ಖಾತರಿ ಇಲ್ಲದೇ ನೀಡುವ ಯೋಜನೆಯನ್ನು ಜಾರಿಗೆ ತಂದಿರುತ್ತದೆ.

1. ಕೈಗಾರಿಕೆಗಳ ಏಪ್ರಿಲ್ ಮತ್ತು ಮೇ 2020 ತಿಂಗಳ ಬೇಡಿಕೆ ಶುಲ್ಕ ಮತ್ತು ಸ್ಥಿರ ಶುಲ್ಕವನ್ನು ಮನ್ನಾ ಮಾಡಿರುತ್ತದೆ.
2. ಇಂಧನ ಇಲಾಖೆಯು ವಿದ್ಯುತ್ ಬಿಲ್‌ನ್ನು ಪ್ರಾಮಾಣಿಕವಾಗಿ ನಿಗದಿತ ಅವಧಿಯೊಳಗೆ ಪಾವತಿಸುವ ಕೈಗಾರಿಕೆಗಳಿಗೆ ರಿಯಾಯಿತಿಯನ್ನು ನೀಡಿರುತ್ತದೆ. ಹೆಚ್‌ಟಿ ಗರಿಷ್ಟ ಮಿತಿ ರೂ.1 ಲಕ್ಷ, ಎಲ್‌ಟಿ ಗರಿಷ್ಟ ಮಿತಿ ರೂ.10,000/-

| | |
|---|---|
| 1 ರಿಂದ 5 ದಿನದೊಳಗೆ ಪಾವತಿಸಿದಲ್ಲಿ | ಶೇ 1% ರಿಯಾಯಿತಿ |
| 6 ರಿಂದ 15 ದಿನದೊಳಗೆ ಪಾವತಿಸಿದಲ್ಲಿ | ಶೇ 0.5% ರಿಯಾಯಿತಿ |
| 15 ರಿಂದ 30 ದಿನದೊಳಗೆ ಪಾವತಿಸಿದಲ್ಲಿ | ಯಾವುದೇ ರಿಯಾಯಿತಿ ಇರುವುದಿಲ್ಲ |

3. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು



Generated from eOffice by NAGARAJ MED, C&I-MIN(...), MINISTER, C&I SEC on .../2022 ...

ಉದ್ಯಮಶೀಲರು ತಮಗೆ ಹಂಚಿಕೆಯಾದ ನಿವೇಶನಗಳ ಕಂತು ಮಾರ್ಚ್, ಏಪ್ರಿಲ್ ಮತ್ತು ಮೇ 2020 ತಿಂಗಳಲ್ಲಿ ಪಾವತಿಸದಿದ್ದಲ್ಲಿ ಆ ಪಾವತಿಯನ್ನು ಕ್ರಮವಾಗಿ 3 ತಿಂಗಳು ಮುಂದೂಡಲಾಗಿದೆ ಮತ್ತು ಈ ಮೊತ್ತಕ್ಕೆ ಯಾವುದೇ ಬಡ್ಡಿಯನ್ನು ವಿಧಿಸುವುದಿಲ್ಲ.

4. ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮವು ಉದ್ಯಮಶೀಲರು ತಮಗೆ ಹಂಚಿಕೆಯಾದ ನಿವೇಶನಗಳ ಕಂತು, ಮಳಿಗೆಗಳ ಬಾಡಿಗೆ ಮತ್ತು ನೀರಿನ ಶುಲ್ಕಗಳ ಏಪ್ರಿಲ್, ಮೇ ಮತ್ತು ಜೂನ್ 2020 ತಿಂಗಳುಗಳ ಕಂತನ್ನು ಈ ಕೆಳಗಿನಂತೆ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ. ಇದಕ್ಕೆ ಯಾವುದೇ ಬಡ್ಡಿಯನ್ನು ವಿಧಿಸಲಾಗುವುದಿಲ್ಲ.

| | |
|---|---|
| ಏಪ್ರಿಲ್ 2020 ತಿಂಗಳ ಕಂತು | ಜೂನ್ 2020 ತಿಂಗಳ ಕಂತಿನ ಜೊತೆ ಪಾವತಿಸತಕ್ಕದ್ದು. |
| ಮೇ 2020 ತಿಂಗಳ ಕಂತು | ಜುಲೈ 2020 ತಿಂಗಳ ಕಂತಿನ ಜೊತೆ ಪಾವತಿಸತಕ್ಕದ್ದು. |
| ಜೂನ್ 2020 ತಿಂಗಳ ಕಂತು | ಆಗಸ್ಟ್, 2020 ತಿಂಗಳ ಕಂತಿನ ಜೊತೆ ಪಾವತಿಸತಕ್ಕದ್ದು. |

ಕೊರೋನಾ 2ನೇ ಅಲೆಯ ನಂತರ ರಾಜ್ಯ ಸರ್ಕಾರದ ಇಂಧನ ಇಲಾಖೆಯು ದಿನಾಂಕ 21/6/2021 ರ ಆದೇಶದಂತೆ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಪಾವತಿಸಬೇಕಾದ ಮೇ ಮತ್ತು ಜೂನ್ 2021 ತಿಂಗಳ ಬೇಡಿಕೆ/ ನಿಗದಿತ ಶುಲ್ಕವನ್ನು ಮನ್ನಾ ಮಾಡಿರುತ್ತದೆ.

ಸಿಐ 58 ಎಸ್‌ಎಸ್‌ಐ 2022

(ಎನ್.ನಾಗರಾಜು (ಎಂ.ಟಿ.ಬಿ))
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು



Generated from eOffice by NAGARAJ MTB C&I-MIN(NMTB), MINISTER, C&I SEC on 18/03/2022 09:06 AM